# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಕೆಂಪೇಗೌಡ ವಾರ್ಡ್ ನಂ-01ರಲ್ಲಿ ದಿನಾಂಕ: 19-02-2022. ರಂದು ನಡೆದ ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ರಜನಿಕಾಂತ್ ಮಳ್ಳಿ, ನೊಡಲ್ ಅಧಿಕಾರಿಗಳು.
2. ಶ್ರೀ.ಮಲ್ಲಿನಾಥ ಮಲ್ಕಾಪುರ, ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ.ಬಾಬರೆಡ್ಡಿ, ಸಹಾಯಕ ಅಭಿಯಂತರರು (ವಿದ್ಯುತ್ ವಿಭಾಗ),
4. ಶ್ರೀ.ವಿವೇಕ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-01.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ನೊಡೆಲ್ ಅಧಿಕಾರಿಗಳು ಹಾಗೂ ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯುನ್ನು ನಡೆಸಲು ವಾರ್ಡ್ ಸಮಿತಿ ನೊಡೆಲ್ ಅಧಿಕಾರಿಗಳನ್ನು ಕೋರಲಾಯಿತು.

1. ಕೆಂಪೇಗೌಡ ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ಬಿ.ಎಂ.ಟಿ.ಸಿ. ಬಸ್ ನಿಲ್ದಾಣದಿಂದ ಮೆಜೆಸ್ಟಿಕ್ ಮೆಜೆಸ್ಟಿಕ್, ಮಾರ್ಕೆಟ್‌ಗೆ, ಯಲಹಂಕ ಹೆಬ್ಬಾಳ ಮಾರ್ಗವಾಗಿ ಶಿವಾಜಿನಗರಕ್ಕೆ ಪ್ರತ್ಯೇಕವಾಗಿ 10 ಬಸ್‌ಗಳನ್ನು ಬಿಡುವಂತೆ ಈ ಹಿಂದಿನ ಸಭೆಯಲ್ಲಿ ಅ.ಬ ಶಿವಕುಮಾರ್ ರವರು ಕೋರಿದ್ದು, ಮತ್ತೊಮ್ಮೆ ಡಿಪೋ ಮ್ಯಾನೆಜರ್ ರವರಿಗೆ ಪತ್ರದ ಮುಖೇನ ತಿಳಿಸಲು ಕೊರಿದರು.

2. ಕೆಂಪೇಗೌಡ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿನ ಎನ್.ಇ.ಎಸ್. ವೃತ್ತದ ಬಳಿ ನಿರ್ಮಾಣ ಮಾಡಿರುವ ಮಿನಿ ವಿಧಾನ ಸೌಧ ಕಟ್ಟಡದ 3ನೇ ಅಂತಸ್ತಿನಲ್ಲಿ ಬಿ.ಬಿ.ಎಂ.ಪಿ ಕಛೇರಿಯಲ್ಲಿ ಯಲಹಂಕ ವಲಯಕ್ಕೆ ಸಂಬಂಧಪಟ್ಟ ಅಧಿಕಾರಿ ನೌಕರರುಗಳು ಕಾರ್ಯನಿರ್ವಹಿಸಬೇಕಾಗಿದ್ದು, ಬ್ಯಾಟರಾಯನಪುರ ಕಛೇರಿಯಿಂದ ಯಲಹಂಕ ಮಿನಿ ವಿಧಾನ ಸೌಧ ಕಟ್ಟಡಕ್ಕೆ ಸ್ಥಳಾಂತರ ಮಾಡಿರುವುದಿಲ್ಲ ಎಂದು ಸಭೆಯಲ್ಲಿ ಅ.ಬ.ಶಿವಕುಮಾರ್ ರವರು ಸಭೆಯಲ್ಲಿ ಕೋರಿದರು.

3. ಕೆಂಪೇಗೌಡ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿರುವ ಕೆನಡಿಯಾನ್ ಶಾಲೆ, ನೀಲಗಿರಿ ತೋಪಿನ ಹತ್ತಿರ, ಕೋಗಿಲು ವೃತ್ತದ ಹತ್ತಿರ, ಉಡುಪಿ ಗ್ರ್ಯಾಂಡ್ ಹಿಂಭಾಗ, ಮಾರುತಿನಗರ ಹಾಗೂ ಇತ್ಯಾದಿ ಸ್ಥಳಗಳಲ್ಲಿ ಯಲಹಂಕ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಕೆಲವು ವಿದ್ಯಾರ್ಥಿಗಳು ಗಾಂಜಾ ಸೇವಿಸುತ್ತಿರುವ ಬಗ್ಗೆ ಸಂಶಯ ಕಂಡು ಬಂಧಿರುವುದಾಗಿ ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಪೋಲಿಸ್ ಇಲಾಖೆಗೆ ಪತ್ರ ಬರೆಯಬೇಕೆಂದು ಸಭೆಯಲ್ಲಿ ಅ.ಬ ಶಿವಕುಮಾರ್ ಕೋರಿದರು.

4. ವಾರ್ಡ್‌ಗಳ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಸ್ತುಗಳನ್ನು ಸಮರ್ಪಕವಾಗಿ ಸಂಗ್ರಹಣೆ ಹಾಗೂ ನಿರ್ವಹಣೆ ಮಾಡುವಂತೆ ಸಂಬಂಧಿಸಿದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ನೊಡೆಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು.

5. ಕೆಂಪೇಗೌಡ ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ಸರ್ಕಾರಿ ಆಸ್ಪತ್ರೆ ರಸ್ತೆ, ಪಾದಚಾರಿ ಮಾರ್ಗದಲ್ಲಿ ಇಟ್ಟಿರುವ ಅಂಗಡಿ ಮುಂಗಟ್ಟುಗಳನ್ನು ತೆಗೆದು ಪಾದಚಾರಿ ಮಾರ್ಗದಲ್ಲಿ ಸಾರ್ವಜನಿಕರು ಸುಗಮವಾಗಿ ಓಡಾಡುವಂತೆ ಮಾಡಲು ಸೂಕ್ತ ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ನೋಡೆಲ್ ಅಧಿಕಾರಿಗಳು ಸಂಬಂಧಿಸಿದ ಸಹಾಯಕ ಅಭಿಯಂತರರಿಗೆ ಸೂಚಿಸಿದರು.

6. ಯಲಹಂಕ 401 ಬಸ್ ಸ್ಟಾಪ್ ಹತ್ತಿರ ನಿರಾಶ್ರಿತರ ತಂಗುದಾಣ ನಿರ್ಮಾಣ ಮಾಡಲು ಅನುಮೋದನೆ ದೊರೆತಿದ್ದು, ಕಾಮಗಾರಿ ಪ್ರಗತಿಯಲ್ಲಿರುವುದಾಗಿ ಸಭೆಯಲ್ಲಿ ಸಹಾಯಕ ಅಭಿಯಂತರರು ನೋಡೆಲ್ ಅಧಿಕಾರಿಗಳಿಗೆ ತಿಳಿಸಿದರು.

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು/ ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)

ವಾರ್ಡ್‌ನ ನೋಡೆಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಢ)

ಪ್ರತಿಯನ್ನು:

ವಾರ್ಡ್ ಸಮಿತಿ ಅಧ್ಯಕ್ಷರು ಮುತ್ತು ಸದಸ್ಯರುಗಳ ಮಾಹಿತಿಗಾಗಿ.

1. ಶ್ರೀ.ರಜನಿಕಾಂತ್ ಮಳ್ಳಿ, ನೊಡಲ್ ಅಧಿಕಾರಿಗಳು.

## ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.